# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2055 |
| ಸದಸ್ಯರ ಹೆಸರು | : ಡಾ|| ಎಂ.ಜಿ. ಮುಳೆ |
| ಉತ್ತರಿಸುವ ಸಚಿವರು | : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |
| ಉತ್ತರಿಸುವ ದಿನಾಂಕ | : 25.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಬೀದರ್ ಜಿಲ್ಲೆಯ ದೂರದ ಗ್ರಾಮೀಣ ಪ್ರದೇಶಗಳಿಂದ ತಾಲ್ಲೂಕು ಕೇಂದ್ರ ಹಾಗೂ ಜಿಲ್ಲಾ ಕೇಂದ್ರಗಳಲ್ಲಿನ ಕಾಲೇಜುಗಳಿಗೆ ನೇರ ಬಸ್ ಸಂಪರ್ಕ ಹೊಂದಿರುವ ಗ್ರಾಮಗಳ ಸಂಖ್ಯೆ ಎಷ್ಟು; ಬಸ್ ಸೌಲಭ್ಯವಿಲ್ಲದ ಗ್ರಾಮಗಳಿಂದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ತಾಲ್ಲೂಕುವಾರು ವಿವರ ನೀಡುವುದು) | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಬೀದರ ಜಿಲ್ಲೆಯ ಒಟ್ಟು 667 ಜನವಸತಿ ಗ್ರಾಮಗಳ ಪೈಕಿ 664 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಉಳಿದ ಕಮಲನಗರ ತಾಲ್ಲೂಕಿನ 03 ಗ್ರಾಮಗಳಾದ ಮುತಖೇಡ, ಮುರ್ಗಾ, ಬಾಳೂರು ಗಳಿಗೆ ಭಾರೀ ವಾಹನಗಳ ಕಾರ್ಯಾಚರಣೆಗೆ ಯೋಗ್ಯ ರಸ್ತೆ ಇಲ್ಲದಿರುವುದರಿಂದ ಸಾರಿಗೆ ಸೌಲಭ್ಯ ಕಲ್ಪಿಸಿರುವುದಿಲ್ಲ.<br>ಬೀದರ್ ವಿಭಾಗದ ವ್ಯಾಪ್ತಿಯ 06 ಘಟಕಗಳಿಂದ ಒಟ್ಟು 605 ಅನುಸೂಚಿಗಳಿಂದ 3617 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರಸ್ತುತ ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಬೇಡಿಕೆ/ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಸದರಿ ಸಾರಿಗೆಗಳ ಪ್ರಯೋಜನವನ್ನು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿರುತ್ತಾರೆ. |
| ಆ. | ಜಿಲ್ಲೆಯಲ್ಲಿನ ಶಾಲೆ-ಕಾಲೇಜು ವಿದ್ಯಾರ್ಥಿಗಳು ಎದುರಿಸುತ್ತಿರುವ ಸಂಚಾರ ಸಮಸ್ಯೆಗಳು, ಬಸ್‌ಗಳ ಕೊರತೆ ಹಾಗೂ ಬಸ್‌ಪಾಸ್ ವಿತರಣೆಯಲ್ಲಿ ಉಂಟಾಗುತ್ತಿರುವ ವಿಳಂಬ ಕುರಿತು ಕಳೆದ ಒಂದು ವರ್ಷದಲ್ಲಿ ಸಾರಿಗೆ ಇಲಾಖೆ ಯಾವುದೇ ಅಧಿಕೃತ ಕ್ಷೇತ್ರ | ಪ್ರತಿ ತಿಂಗಳು ಮೊದಲನೇಯ ಸೋಮವಾರದಂದು ಫೋನ್-ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸದರಿ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿನ ಶಾಲಾ-ಕಾಲೇಜು ವಿದ್ಯಾರ್ಥಿಗಳು ಎದುರಿಸುತ್ತಿರುವ ಸಂಚಾರ ಸಮಸ್ಯೆಗಳು, ಬಸ್‌ಗಳ ಕೊರತೆ ಹಾಗೂ ಬಸ್ ಪಾಸ್ ವಿತರಣೆ/ಇನ್ನಿತರೆ ವಿಷಯಗಳ ಕುರಿತಾಗಿ ಸ್ವೀಕೃತವಾಗುವ ಮನವಿ/ ಅಹವಾಲುಗಳನ್ನು ಪಡೆದುಕೊಂಡು ಕ್ರಮ ಜರುಗಿಸಲಾಗುತ್ತಿದೆ.<br>ಅಲ್ಲದೇ ದಿನಪತ್ರಿಕೆ, ದೃಶ್ಯ ಮಾಧ್ಯಮ, IPGRS, CPGRAMS, CRM, ಇ-ಜನಸ್ಪಂದನ, ಇ-ಮೇಲ್ ಹಾಗೂ ಸಾಮಾಜಿಕ ಜಾಲತಾಣಗಳ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | ಸಮೀಕ್ಷೆ (Field Survey) ನಡೆಸಿದೆಯೇ; ನಡೆಸಿದ್ದರೆ ಕಂಡುಬಂದ ಪ್ರಮುಖ ವಿಷಯಗಳೇನು; | ಮುಖಾಂತರ ಸ್ವೀಕೃತವಾಗುವ ಮನವಿ/ದೂರುಗಳ ಕುರಿತು ಕ್ರಮ ಜರುಗಿಸಲಾಗುತ್ತಿದೆ.<br>ಶಾಲಾ/ ಕಾಲೇಜು ವಿದ್ಯಾರ್ಥಿಗಳಿಗೆ ಅನಾನುಕೂಲವಾಗದಂತೆ ಆನ್‌ಲೈನ್ ಸೇವಾ ಸಿಂಧುವಿನ ಮೂಲಕ ಅರ್ಜಿಗಳನ್ನು ಪಡೆದು ಇಡಿಸಿಎಸ್ ಇಲಾಖೆಯ ಕೆ-1 ಕೌಂಟರ್ ಗಳ ಮುಖಾಂತರ ಸಕಾಲದಲ್ಲಿ ಬಸ್ ಪಾಸ್‌ಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಇ. | ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಶಾಲೆ-ಕಾಲೇಜು ಆರಂಭ ಹಾಗೂ ಮುಕ್ತಾಯ ಸಮಯಗಳಲ್ಲಿ ಹೆಚ್ಚುವರಿ ಟ್ರಿಪ್‌ಗಳನ್ನು (Additional Trips) ಪ್ರಾರಂಭಿಸುವ ಅಥವಾ ವಿಶೇಷ ವಿದ್ಯಾರ್ಥಿ ಬಸ್‌ಗಳನ್ನು ಸಂಚರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ 151 ಸುತ್ತುವಳಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರಸ್ತುತ ಕಲ್ಪಿಸಿರುವ ಸಾರಿಗೆ ಸೌಲಭ್ಯದ ಪ್ರಯೋಜನವನ್ನು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿರುತ್ತಾರೆ. |
| ಈ. | ಬೀದರ್ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (KSRTC) ಬಸ್‌ಗಳಲ್ಲಿ ಅತ್ಯಂತ ಹಳೆಯದು ಹಾಗೂ ಪದೇ ಪದೇ ತಾಂತ್ರಿಕ ದೋಷಕ್ಕೀಡಾಗುತ್ತಿರುವ ಬಸ್‌ಗಳ ಸಂಖ್ಯೆ ಎಷ್ಟು; ಇವುಗಳ ಬದಲಿಗೆ ಈ ಆರ್ಥಿಕ ವರ್ಷದಲ್ಲಿ ಎಷ್ಟು ಹೊಸ ಹಾಗೂ ಸುಸಜ್ಜಿತ ಬಸ್‌ಗಳನ್ನು ಜಿಲ್ಲೆಗೆ ಮಂಜೂರು ಮಾಡಲಾಗಿದೆ; | ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: GSR 29 (E), ದಿನಾಂಕ:16.01.2023ರನ್ವಯ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದನುಸಾರ ಸಾರಿಗೆ ನಿಗಮಗಳ ಬಸ್‌ಗಳನ್ನು ನಿರುಪಯುಕ್ತಗೊಳಿಸಲು 15 ವರ್ಷ ವಯೋಮಾನವನ್ನು ನಿಗದಿಪಡಿಸಲಾಗಿರುತ್ತದೆ.<br>ಮುಂದುವರೆದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸುತ್ತೋಲೆ ಸಂಖ್ಯೆ:810/ 2023, ದಿನಾಂಕ:23.09.2023ರನ್ವಯ ನಿಗಮದಲ್ಲಿನ ಬಸ್‌ಗಳನ್ನು ನಿಷ್ಕ್ರಿಯಗೊಳಿಸಲು ಸೂಚಿಸಿರುವ ಮಾನದಂಡಗಳನ್ನು ಅನುಸರಿಸಲಾಗುತ್ತಿರುತ್ತದೆ.<br>ಬೀದರ್ ವಿಭಾಗದಲ್ಲಿ ನಿಗದಿತ ಕಿ.ಮೀ. ಕ್ರಮಿಸಿರುವ 231 ಬಸ್ಸುಗಳು ಸಂಚರಿಸಿರುತ್ತವೆ. ಆದರೆ ನಿಗಮದಲ್ಲಿ ನಿಗದಿತ ಕಿ.ಮೀ. ಕ್ರಮಿಸಿರುವ ವಾಹನಗಳಿಗೆ ಪೂರ್ವಭಾವಿ ದುರಸ್ತಿ ಕಾರ್ಯಗಳನ್ನು ನಿರ್ವಹಿಸಿ ವಾಹನಗಳನ್ನು ಸುಸ್ಥಿತಿಯಲ್ಲಿಡಲಾಗುತ್ತಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಬೀದರ್ ವಿಭಾಗದಲ್ಲಿ 2025-26ನೇ ಸಾಲಿನಲ್ಲಿ ವಿವಿಧ ಕಾರಣಗಳಿಂದ ಪದೇ ಪದೇ ತಾಂತ್ರಿಕ ದೋಷಕ್ಕೀಡಾಗುತ್ತಿರುವ ಬಸ್‌ಗಳ ಸಂಖ್ಯೆ 19 ಇದ್ದು, ಅವುಗಳನ್ನು ಪರಿಶೀಲಿಸಿ ದುರಸ್ತಿಗೊಳಿಸಿ ಕಾರ್ಯಾಚರಣೆಗೊಳಿಸಲಾಗುತ್ತಿದೆ.<br>ಇದಲ್ಲದೆ, ಹೆಚ್ಚಿನ ಕಿಲೋ ಮೀಟರ್ ಕ್ರಮಿಸಿರುವ ವಾಹನಗಳ, ಭೌತಿಕ ಹಾಗೂ ತಾಂತ್ರಿಕ ಸ್ಥಿತಿಗಳನ್ನಾಧರಿಸಿ ಬಸ್ಸುಗಳನ್ನು ನಿಷ್ಕ್ರಿಯಗೊಳಿಸಲು ಅನುಮತಿಸಲಾಗುತ್ತಿರುತ್ತದೆ. ಮಿತಿಗಿಂತ ಹೆಚ್ಚಿನ ಕಿಲೋ ಮೀಟರ್ ಕ್ರಮಿಸಿ, ತಾಂತ್ರಿಕವಾಗಿ ಸುಸ್ಥಿತಿಯಲ್ಲಿರುವ ಬಸ್‌ಗಳಿಗೆ ಅವಶ್ಯವಿದ್ದಲ್ಲಿ ಕವಚ ಪುನಶ್ಚೇತನ ಕಾರ್ಯಗಳನ್ನು ಕೈಗೊಂಡು ಕಾರ್ಯಾಚರಣೆಗೊಳಿಸಲಾಗುತ್ತಿದ್ದು, ಪ್ರಸ್ತುತ ಎಲ್ಲಾ ಬಸ್ಸುಗಳು ಸುಸ್ಥಿತಿಯಲ್ಲಿರುತ್ತವೆ.<br>ಆದಾಗ್ಯೂ, ಪ್ರತಿ ವರ್ಷ ನಿಗಮದ ಬಸ್‌ಗಳನ್ನು ಅರ್ಹತಾ ಪತ್ರ ನವೀಕರಣಕ್ಕೆ ಒಳಪಡಿಸಿ ಸುಸ್ಥಿತಿಯಲ್ಲಿರುವುದನ್ನು ಖಾತ್ರಿಪಡಿಸಿಕೊಂಡು ಕಾರ್ಯಾಚರಣೆಗೊಳಿಸಲಾಗುತ್ತಿರುತ್ತದೆ. ಮುಂದುವರೆದು, ನಿಗಮದಲ್ಲಿ 15 ವರ್ಷ ಮೀರಿರುವ ಅಥವಾ ನಿಗದಿತ ಕಿ.ಮೀ. ಕ್ರಮಿಸಿರುವ ಹಾಗೂ ದುರಸ್ತಿಗೆ ಲಾಭದಾಯಕವಲ್ಲದ ಬಸ್ಸುಗಳನ್ನು ನಿಷ್ಕ್ರಿಯಗೊಳಿಸಲಾಗುತ್ತಿದೆ.<br>ಕಳೆದ 03 ವರ್ಷಗಳಲ್ಲಿ ಬೀದರ್ ವಿಭಾಗಕ್ಕೆ ವಿವಿಧ ಮಾದರಿಯ **131 ಹೊಸ ಬಸ್ಸುಗಳನ್ನು ಒದಗಿಸಲಾಗಿದೆ.**<br><br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ಬಸ್‌ಗಳನ್ನು ಖರೀದಿಸಿರಲಿಲ್ಲ.**<br>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ 2023-24 ರಿಂದ 2025-26ರವರೆಗೆ ಖರೀದಿಸಿರುವ/ ಖರೀದಿ ಹಂತದಲ್ಲಿರುವ ಹೊಸ ಬಸ್ಸುಗಳ ವಿವರ ಕೆಳಕಂಡಂತಿದೆ: |

| ಸಂಸ್ಥೆಗಳು | 2023-24 (Jan) | 2024-25 | 2025-26 | ಒಟ್ಟು |
|---|---|---|---|---|
| ಕ.ಕ.ರ.ಸಾ. ನಿಗಮ | 720 | 307 | 146 | 1173 |

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>ಮುಂದುವರೆದು, ಈಗಾಗಲೇ ಟೆಂಡರ್ ಪ್ರಕ್ರಿಯೆ ಅಂತಿಮಗೊಂಡಿದ್ದು, ಮಾರ್ಚ್-2026ರ ನಂತರ ಸಾರಿಗೆ ನಿಗಮಗಳಿಗೆ ಸೇರ್ಪಡೆಗೊಳ್ಳಲಿರುವ ಒಟ್ಟು ಬಸ್‌ಗಳು ವಿವರ ಕೆಳಕಂಡಂತಿರುತ್ತದೆ:
<table>
<tr><th>ಸಂಸ್ಥೆ/ನಿಗಮ</th><th>ಬಸ್‌ಗಳ ಸಂಖ್ಯೆ</th><th>ಬಸ್‌ಗಳ ವಿವರ</th></tr>
<tr><td>ಕ.ಕ.ರ.ಸಾ.ನಿಗಮ</td><td>56</td><td>ವಿವಿಧ ರೀತಿಯ ಪ್ರೀಮಿಯಂ ಬಸ್‌ಗಳು</td></tr>
</table>
2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 469(iii)ರಲ್ಲಿ ರಾಜ್ಯದ ವಿವಿಧ ಸಾರಿಗೆ ನಿಗಮಗಳಿಗೆ 2000 ಸಂಖ್ಯೆಯ ಹೊಸ ಡೀಸೆಲ್ ಬಸ್ಸುಗಳನ್ನು ಸೇರ್ಪಡೆಗೊಳಿಸಲಾಗುವುದು ಎಂದು ಘೋಷಿಸಿದ್ದು, ಅದರನ್ವಯ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ 400 ಸಂಖ್ಯೆಯ ಹೊಸ ಬಿ.ಎಸ್-VI ಡೀಸೆಲ್ ಬಸ್ಸುಗಳನ್ನು ಹಂಚಿಕೆ ಮಾಡಲಾಗಿದೆ ಸದರಿ ಬಸ್ಸುಗಳ ಖರೀದಿಗೆ ಅನುದಾನ ಮಂಜೂರಾತಿ ಕೋರಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುದಾನ ನಿರೀಕ್ಷಿಸಲಾಗಿದೆ.<br>
ಕೇಂದ್ರ ಸರ್ಕಾರದ PM e-sewa ಯೋಜನೆಯಡಿಯಲ್ಲ ಕ.ಕ.ರ.ಸಾ.ನಿಗಮಕ್ಕೆ ಒಟ್ಟು 200 ವಿದ್ಯುತ್ ಚಾಲಿತ ಬಸ್ಸುಗಳನ್ನು GCC ಮಾದರಿಯಲ್ಲಿ ಆಚರಣೆ ಮಾಡಲು ಮಂಜೂರಾತಿ ದೊರೆತಿದ್ದು, ಮುಂದಿನ ದಿನಗಳಲ್ಲಿ ಸೇರ್ಪಡೆಗೊಳಿಸಲು ಯೋಜಿಸಲಾಗಿರುತ್ತದೆ.<br>
2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 480 ರಲ್ಲಿ ನಾಲ್ಕು ಸಾರಿಗೆ ನಿಗಮಗಳಿಗೆ 1000 ಡೀಸೆಲ್ ಬಸ್‌ಗಳನ್ನು ಒದಗಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ. ನಿಗಮಕ್ಕೆ ಮುಂದಿನ ದಿನಗಳಲ್ಲಿ ಸೇರ್ಪಡೆಗೊಳ್ಳಲಿರುವ ಹೊಸ ಬಸ್ಸುಗಳನ್ನು ನಿಗಮದ ಕಾರ್ಯಾಯೋಜನೆಯಂತೆ ವಿಭಾಗ/ಘಟಕಗಳ ಅವಶ್ಯಕತೆಗೆ ಅನುಗುಣವಾಗಿ ಹೊಸ ಬಸ್ಸುಗಳನ್ನು ಆದ್ಯತೆಯ ಮೇರೆಗೆ ಒದಗಿಸಲಾಗುವುದು.</td></tr>
<tr><td>ಉ.</td><td>ವಿದ್ಯಾರ್ಥಿನಿಯರ ಸುರಕ್ಷತೆ ಮತ್ತು ಬಸ್‌ಗಳ ಸಂಚಾರದ ನೈಜ ಸಮಯದ ಮಾಹಿತಿಗಾಗಿ ಜಿಲ್ಲೆಯ ಎಲ್ಲಾ ಬಸ್‌ಗಳಲ್ಲಿ ಸಿಸಿಟಿವಿ (CCTV) ಮತ್ತು ಜಿಪಿಎಸ್ (GPS) ಅಳವಡಿಕೆ</td><td>• ವಿದ್ಯಾರ್ಥಿನಿಯರು ಸೇರಿದಂತೆ ಪ್ರಯಾಣಿಕರ ಸುರಕ್ಷತೆಗೆ ಮತ್ತು ಬಸ್‌ಗಳ ಸಂಚಾರದ ನೈಜ ಸಮಯದ ಮಾಹಿತಿಗಾಗಿ ಜಿಲ್ಲೆಯ ಎಲ್ಲಾ ಬಸ್‌ಗಳಲ್ಲಿ ಸಿಸಿಟಿವಿ (CCTV) ಮತ್ತು ಜಿಪಿಎಸ್ (GPS) ಅಳವಡಿಕೆ ಪ್ರಕ್ರಿಯೆ ಪೂರ್ಣಗೊಂಡಿರುವುದಿಲ್ಲ.<br>
• ಬೀದರ್ ಜಿಲ್ಲೆಗೆ ಕಳೆದ 03 ವರ್ಷಗಳಲ್ಲಿ ಹಂಚಿಕೆ ಮಾಡಲಾದ 131 ಹೊಸ ಬಸ್ಸುಗಳಲ್ಲಿ ವಿ.ಎಲ್.ಟಿ.ಎಸ್. (VLTS) ಮತ್ತು</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | ಪ್ರಕ್ರಿಯೆ ಪೂರ್ಣಗೊಂಡಿದೆಯೇ? ಬಾಕಿ ಇದ್ದಲ್ಲಿ, ಅದನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ಕಾಲಮಿತಿ ಏನು? | ಪ್ಯಾನಿಕ್ ಬಟನ್‌ಗಳನ್ನು ಹಾಗೂ B.S.VI ಮಾದರಿಯ 127 ಬಸ್ಸುಗಳಲ್ಲಿ ಸಿಸಿಟಿವಿಗಳನ್ನು (CCTV) ಅಳವಡಿಸಲಾಗಿರುತ್ತದೆ.<br>• ನಿಗಮದ 3500 ಹಳೆಯ ವಾಹನಗಳಿಗೆ VLTS ಹಾಗೂ 500 ಬಸ್ಸುಗಳಿಗೆ CCTV ಅಳವಡಿಸುವ ಕುರಿತು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. |

ಸಂಖ್ಯೆ: ಟಿಡಿ 148 ಟಿಸಿಕ್ಯೂ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು